**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No. 5021/2024**

| | | | |
|---|---|---|---|
| **ಸಾಕ್ಷಿಯ ಹೆಸರು** | : | ಜಮೀರ್ ಅಹಮ್ಮದ್ ಎಲ್. ಜೆ | **PW**. 05 |
| **ತಂದೆಯ ಹೆಸರು** | : | ಲೇಟ್ ಜಮಾಲ್ ಖಾನ್ | **CW**.22 |
| **ವಯಸ್ಸು** | : | **60 ವರ್ಷಗಳು** | |
| **ಉದ್ಯೋಗ** | : | ಪಿ.ಎಸ್.ಐ ಪಿರಿಯಾಪಟ್ಟಣ ಪೊಲೀಸ್ ಠಾಣೆ | |
| **ವಾಸಸ್ಥಳ** | : | ಪಿರಿಯಾಪಟ್ಟಣ | |

ದಿನಾಂಕ **15.06.2026** ರಂದು ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ- ಸರ್ಕಾರಿ ಅಭಿಯೋಜಕರಿಂದಃ-**

ನಾನು 05.08.2022 ರಿಂದ 26.02.2026 ವರೆಗೆ ಹುಣಸೂರು ನಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27.08.2023 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ದೂರು ಮತ್ತು ಎಂ.ಐ ಕಂಪನಿಯ ಸೆಲ್ ಫೋನ್ ಹಾಜರುಪಡಿಸಿದ್ದು, ಸದರಿ ದೂರಿನ ಆಧಾರ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 165/2023 ರಂತೆ ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರಥಮ ವರ್ತಮಾನ ವರದಿಯನ್ನು ಘನ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟಿರುತ್ತೇನೆ.

ಸದರಿ ಪಿರ್ಯಾದಿನ್ನು ಈಗ ನೋಡಿ ಗುರುತಿಸಿದ್ದು ಅದು ಈಗ ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡಿ ಗುರುತಿಸಿದ್ದು ಅದು ಈಗ ನಿಪಿ-9 ಎಂದು, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ನಂತರ ಪಂಚರ ಸಮಕ್ಷಮ ಮಹಜರು ಮಾಡಿ ಫೋನ್ ನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಸದರಿ ಅಮಾನತ್ತು ಪಂಚನಾಮೆ ಈಗ ನೋಡಿ ಗುರುತಿಸಿದ್ದು ಅದು ಈಗ ನಿಪಿ–2 ಎಂದು, ಸಾಕ್ಷಿಯ ಸಹಿಯನ್ನು ನಿಪಿ–2(ಬಿ) ಎಂದು ಗುರುತಿಸಲಾಯಿತು. ಸದರಿ ಫೋನ್ ನ್ನು ಈಗಾಗಲೇ ಮು.ಮಾ–1 ಎಂದು ಗುರುತಿಸಲಾಗಿರುತ್ತದೆ.

ನಂತರ ಅದೇ ದಿನ ಮಧ್ಯಾಹ್ನ 12.25 ಕ್ಕೆ ನಾನು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಪಂಚರ ಸಮಕ್ಷಮ ಮಧ್ಯಾಹ್ನ 12.30 ರಿಂದ 3.00 ವರೆಗೆ ಮೃತರ ಶವ ಪಂಚನಾಮೆಯನ್ನು ಮಾಡಿರುತ್ತೇನೆ. ಸದರಿ ಮೃತರ ಶವ ಪಂಚನಾಮೆಯನ್ನು ಈಗಾಗಲೇ ನಿಪಿ–3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ–3(ಎ) ಎಂದು ಗುರುತಿಸಲಾಯಿತು.

ಶವದ ಕುತ್ತಿಗೆ ಮೇಲೆ ನೇಣು ಬಿಗಿದ ಗುರುತು ಇತ್ತು. ನಂತರ ವೈಧ್ಯರಿಗೆ ಮನವಿ ಸಲ್ಲಿಸಿ ಅವರು ಮರಣೋತ್ತರ ಪರೀಕ್ಷೆ ಮಾಡಲು ಕೋರಿಕೊಂಡಿದ್ದು, ವೈಧ್ಯರು ಮರಣೋತ್ತರ ಪರೀಕ್ಷೆ ಮಾಡಿದ ನಂತರ ಶವವನ್ನು ವಾರಸುದ್ದಾರರಿಗೆ ನೀಡಿರುತ್ತೇನೆ.

ಅದೇ ದಿನ ಸಂಜೆ 5.20 ಕ್ಕೆ ಕೃತ್ಯ ನಡೆದ ಸ್ಥಳಕ್ಕೆ ಹೋಗಿ ಚಾಸಾ–10 ಮತ್ತು ಚಾಸಾ–11 ಸಮಕ್ಷಮ ಸ್ಥಳ ಪಂಚನಾಮೆ ಮಾಡಿ, ಕೃತ್ಯಕ್ಕೆ ಬಳಸಿದ ಸೀರೆಯನ್ನು ಜಪ್ತಿ ಮಾಡಿರುತ್ತೇನೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ–7 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ–7(ಬಿ) ಎಂದು ಗುರುತಿಸಲಾಯಿತು. ಸದರಿ ಸೀರೆಯನ್ನು ಈಗ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಮು.ಮಾ–2 ಎಂದು ಗುರುತಿಸಲಾಯಿತು.

ನಂತರ ಅದೇ ಸಮಯದಲ್ಲಿ ಚಾಸಾ–2 ರಿಂದ ಚಾಸಾ–4 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಶವ ಪಂಚನಾಮೆ ಕಾಲಕ್ಕೆ ಚಾಸಾ–5 ರವರ ಹೇಳಿಕೆ ಪಡೆದಿರುತ್ತೇನೆ.

ದಿ.07.09.2023 ರಂದು ಮೈಸೂರಿನ ಸೆನ್ ಪೊಲೀಸ್ ಠಾಣೆಗೆ ಭೇಟಿ ನೀಡಿ ವಶಪಡಿಸಿಕೊಂಡಿರುವ ಫೋನ್ ನ್ನು ಅವರ ಮುಂದೆ ಹಾಜರು ಮಾಡಿ, ಸೆನ್ ಪೊಲೀಸ್ ಠಾಣೆಯವರು ಫೋನ್ ನ್ನು ಪರಿಶೀಲಿಸಿ ಅದು ಲಾಕ್ ಆಗಿದ್ದು, ಓಪನ್ ಆಗುವುದಿಲ್ಲ ಎಂದು ಹಿಂಬರಹ ನೀಡಿದ್ದರು. ಸದರಿ ಹಿಂಬರಹವನ್ನು ಸಾಕ್ಷಿ ಈಗ ನೋಡಿ ಗುರುತಿಸಿದ್ದು ನಿಪಿ–10 ಎಂದು, ಸಾಕ್ಷಿಯ ಸಹಿಯನ್ನು ನಿಪಿ–10(ಎ) ಎಂದು ಗುರುತಿಸಲಾಯಿತು.

ಮೃತಳು ಆತ್ಮಹತ್ಯೆ ಮಾಡಿಕೊಂಡಿರುವ ವಿಚಾರ ಗೊತ್ತಾಗಿ ಆರೋಪಿಯು ಆತ್ಮಹತ್ಯೆಗೆ ಪ್ರಯತ್ನ ಮಾಡಿ ಆಸ್ಪತ್ರೆಗೆ ದಾಖಲಾಗಿರುತ್ತಾನೆ.

02.10.2023 ರಂದು ಆರೋಪಿಯು ನೀರಿಕ್ಷಣಾ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು, ಆತನನ್ನು ವಿಚಾರಿಸಿ ಬಿಡುಗಡೆ ಮಾಡಿರುತ್ತೇನೆ. ಆರೋಪಿಯ ಫೋನ್ ನ್ನು ಪರಿಶೀಲಿಸಲಾಗಿ ಅದರಲ್ಲಿ ಮೃತರೊಂದಿಗೆ ಸಂಭಾಷಣೆ ಮಾಡಿರುವ ಯಾವುದೇ ಗುರುತು ಇರಲಿಲ್ಲ. ಸದರಿ ಫೋನ್ ನ್ನು ಜಪ್ತಿ ಮಾಡಿ ಪಂಚರ ಸಮಕ್ಷಮ ಪಂಚನಾಮೆ ಮಾಡಿರುತ್ತೇನೆ. ಸದರಿ ಪಂಚನಾಮೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–11 ಎಂದು, ಸಾಕ್ಷಿಯ ಸಹಿಯನ್ನು ನಿಪಿ–11(ಎ) ಎಂದು ಗುರುತಿಸಲಾಯಿತು. ಸದರಿ ಫೋನ್ ನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಮು.ಮಾ–3 ಎಂದು ಗುರುತಿಸಲಾಯಿತು.

ನಂತರ ಕೃತ್ಯದ ನಡೆದ ಸ್ಥಳದ ನಕಾಶೆಯನ್ನು ತಯಾರು ಮಾಡಿಕೊಡಲು ದಿ 22.12.2023 ರಂದು ಪುರಸಭೆ ಇಂಜಿನಿಯರ್ ಮನವಿ ಸಲ್ಲಿಸಿದ್ದು, ಅವರು ಸ್ಥಳ ಪರಿಶೀಲಿಸಿ ನಕಾಶೆಯನ್ನು ತಯಾರಿಸಿ ನಮಗೆ ನೀಡಿರುತ್ತಾರೆ. ಅದು ಈಗಾಗಲೇ ನಿಪಿ–5 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿಪಿ–5(ಎ) ಎಂದು ಗುರುತಿಸಲಾಯಿತು.

ಈ ನಡುವೆ ದಿನಾಂಕ 04.12.2023 ರಂದು ಮರಣೊತ್ತರ ಪರೀಕ್ಷ ವರದಿಯನ್ನು ಪಡೆದು ಕಡತಕ್ಕೆ ಲಗತ್ತಿಸಿರುತ್ತೇನೆ. ಅದು ಈಗಾಗಲೇ ನಿಪಿ–4 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ–4(ಬಿ) ಎಂದು ಗುರುತಿಸಲಾಯಿತು.

ಅದೇ ದಿನ ವೈಧ್ಯರಿಗೆ ಮನವಿ ಸಲ್ಲಿಸಿ ಮು.ಮಾ–2 ಸೀರೆಯಿಂದ ನೇಣು ಬಿಗಿದುಕೊಳ್ಳುವ ಬಗ್ಗೆ ಅಭಿಪ್ರಾಯ ವರದಿಯನ್ನು ಕೋರಿದ್ದು, ವೈಧ್ಯರು ಸೀರೆಯನ್ನು ಪರಿಶೀಲಿಸಿ ಆ ಬಗ್ಗೆ ಅಭಿಪ್ರಾಯ ವರದಿ ನೀಡಿರುತ್ತಾರೆ. ಅದನ್ನು ಸಾಕ್ಷಿ ನೋಡಿ ಗುರುತಿದ್ದು ನಿಪಿ–12 ಎಂದು, ಸಾಕ್ಷಿಯ ಸಹಿಯನ್ನು ನಿಪಿ–12(ಎ) ಎಂದು ಗುರುತಿಸಲಾಯಿತು. ನಂತರ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿಯ ವಿರುದ್ದ ಸಾಕಷ್ಟು ಸಾಕ್ಷ್ಯಧಾರಗಳು ಇದ್ದ ಕಾರಣ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

**<u>ಪಾಟೀಸವಾಲುಃ– ಆರೋಪಿ ಪರ ಶ್ರೀ ಎಸ್. ಪಿ. ವಕೀಲರಿಂದಃ–</u>**

ಪಿರ್ಯಾದುದಾರರು ಠಾಣೆಗೆ ಬಂದು ದೂರು ನೀಡಿಲ್ಲ ಎಂದರೆ ಸರಿಯಲ್ಲ. ನಾನು ದೂರನ್ನು ಸೃಷ್ಟಿ ಮಾಡಿಕೊಂಡು ಆರೋಪಿಯ ವಿರುದ್ದ ಸುಳ್ಳು ಪ್ರಕರಣದ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮೇಲಾಧಿಕಾರಿಗಳ ಮಾತುಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮೃತ ಅಂಕಿತ ಮತ್ತು ಆರೋಪಿ ಪರಸ್ಪರ ಪ್ರೀತಿ ಮಾಡಿ ಮದುವೆ ಮಾಡಿಕೊಡಲು ಯೋಚಿಸಿದ್ದರು ಎಂದರೆ ಸರಿ. ಅವರಿಬ್ಬರು ಒಟ್ಟಿಗೆ ಹೊರಗಡೆ ಓಡಾಡುತ್ತಿದ್ದರು ಎಂದರೆ ಸರಿ. ಮೃತ ಅಂಕಿತ ಮತ್ತು ಆರೋಪಿ ಮನೆಯವರು ಮದುವೆಯಾಗುವವರೆಗೆ ಒಟ್ಟಿಗೆ ಹೊರಗಡೆ ಓಡಾಡ ಬೇಡಿ ಮತ್ತು ಮಾತು ಆಡಬೇಡಿ ಎಂದು ಬುದ್ದಿ ಮಾತು ಹೇಳಿದ್ದರು ಎಂದರೆ ಸರಿ. ಆ ಕಾರಣದಿಂದ ಮೃತ ಅಂಕಿತ ಬೇಸರ ಬಂದು ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಳು ಎಂದರೆ ಸರಿಯಲ್ಲ.

ಪಂಚರ ಸಮಕ್ಷಮ ಪಂಚನಾಮೆಗಳನ್ನು ಮಾಡಿಲ್ಲ ಮತ್ತು ಮುದ್ದೆ ಮಾಲುಗಳನ್ನು ಜಪ್ತಿ ಮಾಡಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳನ್ನು ಈ ಪ್ರಕರಣಕ್ಕೆ ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ.

ಸಾಕ್ಷಿದಾರರ ಹೇಳಿಕೆಗಳನ್ನು ಅವರ ಹೇಳಿಕೆಯಂತೆ ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಮನೆಯ ಆರ್ಥಿಕ ಪರಿಸ್ಥಿತಿಯ ಕಾರಣಗಳಿಂದ ಅಂಕಿತಳನ್ನು ಬೇರೆ ಕಡೆ ಕೊಟ್ಟು ಮದುವೆ ಮಾಡಲು ಅಂಕಿತಳ ಮನೆಯವರು ತಿರ್ಮಾಣ ಮಾಡಿದ್ದ ಕಾರಣ ಅಂಕಿತ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುತ್ತಾಳೆ ಎಂದರೆ ಸರಿಯಲ್ಲ.

ಆರೋಪಿಯ ವಿರುದ್ಧ ಯಾವುದೇ ಸಾಕ್ಷಿ ಆಧಾರಗಳು ಇಲ್ಲದೆ ಇದ್ದರೂ ದೋಷಾರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮೇಲಾಧಿಕಾರಿಗಳ ಮಾತುಕೇಳಿಕೊಂಡು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

**sd/-**

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.